ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಸಭೆ ಸಚಿವಾಲಯ

**M.K. VISHALAKSHI**
Secretary (I/c)
Karnataka Legislative Assembly Secretariat

ಸಂಖ್ಯೆ: ಕವಿಸಸ/ಕಾ/19/ಪ.ಪ್ರ/2020 ದಿನಾಂಕ: 30-05-2020

## ಪತ್ರಿಕಾ ಪ್ರಕಟಣೆ

ವಿಧಾನ ಮಂಡಲ/ವಿಧಾನ ಸಭೆಯ ಸಮಿತಿಗಳು ಸ್ಥಳೀಯ ಭೇಟಿ ಅಥವಾ ಸ್ಥಳ ಪರಿಶೀಲನೆ ನಡೆಸಲು ಅವಕಾಶ ನೀಡದೆ ಸಮಿತಿಯ ಕೆಲಸಕಾರ್ಯಗಳಿಗೆ ಅಡ್ಡಿಯುಂಟು ಮಾಡುವ ಮೂಲಕ ಭ್ರಷ್ಟಾಚಾರ ಎಸಗುವವರಿಗೆ ಮಾನ್ಯ ಸಭಾಧ್ಯಕ್ಷರು ರಕ್ಷಣೆ ನೀಡುತ್ತಿದ್ದಾರೆಂದು ಮಾಧ್ಯಮಗಳಲ್ಲಿ ಸುದ್ದಿ, ವರದಿ, ಸಂಪಾದಕೀಯಗಳನ್ನು ಪ್ರಕಟಿಸುವ ಮೂಲಕ ಹಗುರವಾಗಿ ಬಿಂಬಿಸಲಾಗಿರುವುದನ್ನು ಗಮನಿಸಲಾಗಿರುತ್ತದೆ. ಈ ಸಂಬಂಧ ಈ ಕೆಳಕಂಡಂತೆ ಸ್ಪಷ್ಟೀಕರಣವನ್ನು ನೀಡಲಾಗಿದೆ.

1. ದೇಶದಲ್ಲಿ ವ್ಯಾಪಕವಾಗಿ ಹರಡುತ್ತಿರುವ ಕೊರೊನ ವೈರಾಣುವಿನ (ಕೋವಿಡ್-19) ಪರಿಣಾಮವನ್ನು ಗಮನಿಸಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಈ ಸಂಬಂಧ ಕೈಗೊಳ್ಳಬೇಕಾದ ಸುರಕ್ಷತಾ ಕ್ರಮಗಳ ಕುರಿತು ಹೊರಡಿಸಲಾದ ಮಾರ್ಗಸೂಚಿಗಳನ್ನು ಪರಿಗಣಿಸಿ ಲಾಕ್‌ಡೌನ್ ಸಂದರ್ಭದಲ್ಲಿ ತಾತ್ಕಾಲಿಕವಾಗಿ ವಿಧಾನ ಮಂಡಲ ಹಾಗೂ ವಿಧಾನಸಭೆಯ ಸಮಿತಿಗಳು ಸಭೆಗಳನ್ನು ನಡೆಸುವುದನ್ನು ಸ್ಥಗಿತಗೊಳಿಸಲಾಗಿತ್ತು.
2. ನಂತರ ಹಂತ ಹಂತವಾಗಿ ರಾಜ್ಯದಲ್ಲಿ ಲಾಕ್‌ಡೌನ್ ಸಡಿಲಿಕೆ ಮಾಡಿದ ಹಿನ್ನೆಲೆಯಲ್ಲಿ ಪ್ರಥಮ ಹಂತದಲ್ಲಿ ದಿನಾಂಕ: 18-05-2020ರ ನಂತರ ಸಮಿತಿ ಸಭೆಗಳನ್ನು ನಡೆಸಲು ಮಾತ್ರ ಅವಕಾಶ ಕಲ್ಪಿಸಲಾಯಿತು.
3. ಸಮಿತಿ ಸಭೆಗಳನ್ನು ನಡೆಸುವಾಗ ಆದಷ್ಟು ಕೊರೊನ ವೈರಾಣುವನ್ನು (ಕೋವಿಡ್-19) ಹತೋಟಿಗೆ ತರಲು ತೊಡಗಿಸಿಕೊಂಡಿರುವ ಇಲಾಖೆಗಳನ್ನು ಹೊರತುಪಡಿಸಿ ಸಮಿತಿ ಸಭೆಗಳನ್ನು ನಡೆಸಲು ಸೂಚನೆಗಳನ್ನು ನೀಡಲಾಗಿತ್ತು.

--2

ಕೊಠಡಿ ಸಂಖ್ಯೆ : 121, ಅಂಚೆ ಪೆಟ್ಟಿಗೆ ಸಂಖ್ಯೆ: 5074, ಮೊದಲನೇ ಮಹಡಿ, ವಿಧಾನಸೌಧ, ಬೆಂಗಳೂರು-560 233
ದೂರವಾಣಿ ಕಛೇರಿ : 22250702, ಆಂತರಿಕ : 3471, ಫ್ಯಾಕ್ಸ್ : 22258301 ನಿವಾಸ : 23154730, ಮೊಬೈಲ್ : 9448108798
ಇ-ಮೇಲ್ : secy-kla-kar@nic.in

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಸಭೆ ಸಚಿವಾಲಯ

M.K. VISHALAKSHI
Secretary (I/c)
Karnataka Legislative Assembly Secretariat



4. ಸಮಿತಿಗಳು ಅಧ್ಯಯನ ಪ್ರವಾಸ/ಸ್ಥಳ ಪರಿಶೀಲನೆ ಕೈಗೊಂಡಾಗ ಸಮಿತಿಯ ಸದಸ್ಯರುಗಳು, ಇಲಾಖಾ ಅಧಿಕಾರಿಗಳು ಮತ್ತು ಸಾರ್ವಜನಿಕರು ಮುಕ್ತವಾಗಿ ಭೇಟಿ ಮಾಡುವ ಸಂದರ್ಭ ಉಂಟಾಗುವುದರಿಂದ ಕೊರೊನ (ಕೋವಿಡ್-19) ವೈರಾಣು ಹರಡುವಿಕೆಯ ಗಂಭೀರತೆಯನ್ನು ಪರಿಗಣಿಸಿ ಆರೋಗ್ಯದ ಹಿತದೃಷ್ಟಿಯಿಂದ ಸಮಿತಿಗಳು ರಾಜ್ಯದೊಳಗೆ ಅಥವಾ ಹೊರರಾಜ್ಯಗಳಲ್ಲಿ ಯಾವುದೇ ಅಧ್ಯಯನ ಪ್ರವಾಸವನ್ನು ಹಾಗೂ ಸ್ಥಳೀಯವಾಗಿ ಯಾವುದೇ ಭೇಟಿ ಅಥವಾ ಸ್ಥಳ ಪರಿಶೀಲನೆಗಳನ್ನು ಮುಂದಿನ ಆದೇಶದವರೆಗೆ ಕೈಗೊಳ್ಳಬಾರದೆಂದು ಸೂಚಿಸಲಾಗಿತ್ತು.

ಮೇಲ್ಕಂಡ ಕ್ರಮಗಳನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಮಾರ್ಗಸೂಚಿಗಳನ್ನು ಗಮನದಲ್ಲಿಟ್ಟುಕೊಂಡು ಕೈಗೊಳ್ಳಲಾಗಿದೆಯೇ ಹೊರತು ಅದರಲ್ಲಿ ಯಾವುದೇ ದುರುದ್ದೇಶ ಇಲ್ಲವೆಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ. ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಲಾಕ್‌ಡೌನ್ ಸಂಬಂಧದ ಮಾರ್ಗಸೂಚಿಗಳನ್ನು ಮತ್ತಷ್ಟು ಸಡಿಲಗೊಳಿಸಿದ್ದಲ್ಲಿ ಮೇಲ್ಕಂಡ ಆದೇಶವನ್ನು ಮರು ಪರಿಶೀಲಿಸುವ ಕುರಿತು ಮಾನ್ಯ ಸಭಾಧ್ಯಕ್ಷರ ಗಮನಕ್ಕೆ ತರಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ.

M.K. Vishalakshi
(ಎಂ.ಕೆ.ವಿಶಾಲಾಕ್ಷಿ)
ಕಾರ್ಯದರ್ಶಿ(ಪ್ರ)
ಕರ್ನಾಟಕ ವಿಧಾನ ಸಭೆ ಸಚಿವಾಲಯ.

ಗೆ,

ಎಲ್ಲಾ ಪತ್ರಿಕಾ ಮತ್ತು ವಿದ್ಯುನ್ಮಾನ ಮಾಧ್ಯಮಗಳ ಸಂಪಾದಕರು –
ಮೇಲ್ಕಂಡ ಪತ್ರಿಕಾ ಪ್ರಕಟಣೆಯನ್ನು ಪ್ರಚುರಪಡಿಸಬೇಕೆಂದು ಕೋರಿದೆ.

ಕೊಠಡಿ ಸಂಖ್ಯೆ : 121, ಅಂಚೆ ಪೆಟ್ಟಿಗೆ ಸಂಖ್ಯೆ: 5074, ಮೊದಲನೇ ಮಹಡಿ, ವಿಧಾನಸೌಧ, ಬೆಂಗಳೂರು-560 233
ದೂರವಾಣಿ ಕಛೇರಿ : 22250702, ಆಂತರಿಕ : 3471, ಫ್ಯಾಕ್ಸ್ : 22258301 ನಿವಾಸ : 23154730, ಮೊಬೈಲ್ : 9448108798
ಇ-ಮೇಲ್ : secy-kla-kar@nic.in